## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ,, ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಗ್ಯಾಜೆಟಿಯರ್ ಇಲಾಖೆ ಮತ್ತು ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆಗಳ 2015-16ನೇ ಸಾಲಿನ ಮುಂದುವರೆದು ಯೋಜನಾ ಕಾರ್ಯಕ್ರಮಗಳಿಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ದಿ:09-04-2015ರ ಅ.ಸ. ಪತ್ರ ಸಂಖ್ಯೆ: ಪಿಡಿ/15/ಐಎಂಎಂ/2015.
2. ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ರವರ ಪತ್ರ ಸಂಖ್ಯೆ:ಅಪ್ರಾಸಂಪ/ಲೆ.ಅ/ಲೆ.ಶಾ 2014-15, ದಿನಾಂಕ:10/04/2015.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಸಂಬಂಧಪಟ್ಟ ಆಡಳಿತ ಇಲಾಖಾ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಯೋಜನಾ ಇಲಾಖೆ ಹಾಗೂ ಆರ್ಥಿಕ ಇಲಾಖೆಗಳ ನೋಡಲ್ ಅಧಿಕಾರಿಗಳನ್ನೊಳಗೊಂಡ ಸಮಿತಿಯ ಸಭೆ ನಡೆಸಿ, 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಘೋಷಣೆಯ ಅನುಸಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮಾರ್ಪಾಡು ಇಲ್ಲದ/ ಹೆಚ್ಚುವರಿ ಘಟಕಗಳನ್ನು ಒಳಗೊಳ್ಳದ ಮುಂದುವರೆದ ಯೋಜನೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶವನ್ನು ದಿನಾಂಕ: 01-04-2015 ರಿಂದ ಜಾರಿಗೆ ಬರುವಂತೆ ಹೊರಡಿಸಿ, ಅದರ ಪ್ರತಿಯನ್ನು ನಿರ್ದೇಶಕರು (ಪಿ.ಎಂ.ಐ) ಯೋಜನಾ ಇಲಾಖೆಗೆ ಮಾಹಿತಿಗಾಗಿ ಕಳುಹಿಸಿ ಕೊಡುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರು ಕೋರಿರುತ್ತಾರೆ.

2014-15ನೇ ಸಾಲಿನ ಯೋಜನಾ ಕಾರ್ಯಕ್ರಮಗಳನ್ನು 2015-16ನೇ ಸಾಲಿನಲ್ಲಿ ಮುಂದುವರೆಸುವ ಬಗ್ಗೆ ಮೇಲೆ ಓದಲಾದ ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಯವರ ಅಧ್ಯಕ್ಷತೆಯಲ್ಲಿ ದಿನಾಂಕ:13-04-2015 ಮತ್ತು 15-04-2015 ರಂದು ನಡೆದ ಸಭೆಯಲ್ಲಿ ಆರ್ಥಿಕ ಮತ್ತು ಯೋಜನಾ ಇಲಾಖೆಯ ನೋಡಲ್ ಅಧಿಕಾರಿಗಳು ಭಾಗವಹಿಸಿದ್ದು, ಸದರಿ ಸಭೆಯಲ್ಲಿ ಈ ವಿಷಯನ್ನು ವಿವರವಾಗಿ ಚರ್ಚಿಸಿ ಅನುಮೋದನೆ ನೀಡಲಾಗಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಕಸಂವಾ 81 ಕೆಎಂಯು 2015.**
**ಬೆಂಗಳೂರು, ದಿನಾಂಕ:17/04/2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಆದೇಶಕ್ಕೆ ಲಗತ್ತಿಸಿದ ಅನುಬಂಧ-ಎ, ಅನುಬಂಧ-ಬಿ, ಅನುಬಂಧ-ಸಿ ಹಾಗೂ ಅನುಬಂಧ-ಡಿ ರಲ್ಲಿ ಹೇಳಲಾದ ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಗ್ಯಾಜೆಟಿಯರ್ ಇಲಾಖೆ ಮತ್ತು ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆಗಳ 2015-16ನೇ ಸಾಲಿನ ಮುಂದುವರೆದ ಯೋಜನೆಗಳಿಗೆ ಈ ಕೆಳಕಂಡ ಷರತ್ತುಗಳಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ.

**ಷರತ್ತುಗಳು**

1. 2014-15ನೇ ಸಾಲಿನಲ್ಲಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು. ಈ ಮುಂದುವರೆದ ಯೋಜನೆಗಳು ದಿನಾಂಕ 01/04/2015ರಿಂದ ಅನ್ವಯವಾಗುತ್ತದೆ.

2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದ್ದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.
4. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.
5. ಅನುಬಂಧದಲ್ಲಿನ ಪ್ರತಿಯೊಂದು ಯೋಜನಾ ಕಾರ್ಯಕ್ರಮಕ್ಕೆ ಪ್ರತ್ಯೇಕವಾಗಿ ಮಾಸಿಕ ಕಾರ್ಯಕ್ರಮ ಅನುಷ್ಠಾನ ವರದಿಯನ್ನು ನಿಗದಿತ ನಮೂನೆಯಲ್ಲಿ ತಯಾರಿಸಿ ಪ್ರತಿ ತಿಂಗಳ 15 ನೇ ತಾರೀಖಿನೊಳಗೆ ನಿರ್ದೇಶಕರು (ಪಿಎಂಐ) ಯೋಜನಾ ಇಲಾಖೆ ಇವರಿಗೆ ಕಳುಹಿಸಿಕೊಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10.07.1996ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

G. Annapurna 17/4/15

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ :

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001
2. ಪ್ರಧಾನ ಮಹಾಲೇಖಪಾಲರು (ಇ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001
3. ಪ್ರಧಾನ ಮಹಾಲೇಖಪಾಲರು, (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಪಿ.ಬಿ.ನಂ.5329, ಬೆಂಗಳೂರು.
4. ನೋಡಲ್ ಅಧಿಕಾರಿ ಮತ್ತು ಸರ್ಕಾರದ ಉಪ ಕಾರ್ಯದರ್ಶಿ-2, ಆರ್ಥಿಕ ಇಲಾಖೆ, ಬೆಂಗಳೂರು.
5. ನೋಡಲ್ ಅಧಿಕಾರಿಗಳು, ನಿರ್ದೇಶಕರು, ಮೌಲ್ಯಮಾಪನ ವಿಭಾಗ, ಯೋಜನಾ ಇಲಾಖೆ, ಕೊಠಡಿ ಸಂಖ್ಯೆ:622, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣ, ಮೈಸೂರು.
7. ಅಧ್ಯಕ್ಷರು, ಗಡಿ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
8. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ನಿರ್ದೇಶನಾಲಯ, ಬೆಂಗಳೂರು.
9. ನಿರ್ದೇಶಕರು, ಕರ್ನಾಟಕ ಗ್ಯಾಜೆಟಿಯರ್ ಇಲಾಖೆ, ಬೆಂಗಳೂರು.
10. ಆಯುಕ್ತರು, ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ, ಬಳ್ಳಾರಿ

11. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನ ಸೌಧ, ಬೆಂಗಳೂರು.
15. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನರ, ಹಿರಿಯನಾಗರಿಕರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.

ಅನುಬಂಧ-ಬಿ

ಕರ್ನಾಟಕ ಗ್ಯಾಸೆಟಿಯರ್ ಇಲಾಖೆ

2015-16ನೇ ಸಾಲಿನ ಮುಂದುವರೆದ ಯೋಜನೆಗಳು

| ಕ್ರಮ ಸಂಖ್ಯೆ: | ಯೋಜನೆಯ ಹೆಸರು ಮತ್ತು ಲೆಕ್ಕಶೀರ್ಷಿಕೆ | 2015-16ರ ಆಯವ್ಯಯದಲ್ಲಿ ಒದಗಿಸಿರುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1 | 3454-020110-0-01-059<br>ಇತರೆವೆಚ್ಚಗಳು<br>ಜಿಲ್ಲಾ/ತಾಲ್ಲೂಕು ಗ್ಯಾಸೆಟಿಯರ್‌ಗಳ ರಚನೆ, ಸಂಪಾದನೆ ಮತ್ತು ಮುದ್ರಣ | 6.00 |
| | ಒಟ್ಟು | 6.00 |

G. Annapurna 17/4/15

(ಜಿ.ಅನ್ನಪೂರ್ಣ)

ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ

(ಆಡಳಿತ ಕನ್ನಡ)

ವಿಷಯ: ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2015-16ನೇ ಸಾಲಿನ ಕ್ರಿಯಾಯೋಜನೆಗೆ ತಾತ್ವಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸಟಿಯರ್ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಕಗ್ಯಾಇ:ಸಿ(2):ಕ್ರಿಯೋ-ಎಂಪಿಕ್‌ಯೋ/2015-16/44, ದಿನಾಂಕ:26/05/2015.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:26/05/2015ರ ಪತ್ರದಲ್ಲಿ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ 2015-16ನೇ ಸಾಲಿಗೆ ಹಂಚಿಕೆ ಮಾಡಲಾದ ಅನುದಾನಕ್ಕೆ ಅನುಗುಣವಾಗಿ ಕ್ರಿಯಾಯೋಜನೆಯನ್ನು ತಯಾರಿಸಿ, ಮುಂದುವರೆದ ಯೋಜನೆಗಳು ಹಾಗೂ ಹೊಸ ಯೋಜನೆಗಳನ್ನು ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡುವಂತೆ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ರವರು ಸರ್ಕಾರವನ್ನು ಕೋರಿರುತ್ತಾರೆ.

ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸಟಿಯರ್ ಇಲಾಖೆ, ಬೆಂಗಳೂರು ರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ:ಕಸಂವಾ 05 ಕರಾಗೆ 2015.**
**ಬೆಂಗಳೂರು, ದಿನಾಂಕ:10/08/2015.**

Computer - 40 18/8/15 ಡಿ.50 18/8/15

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ ಸಂಬಂಧಿಸಿದಂತೆ, 2015-16ನೇ ಸಾಲಿನ ಕ್ರಿಯಾ ಯೋಜನೆ ಹಾಗೂ ಮುಂದುವರೆದ ಯೋಜನಾ ಕಾರ್ಯಕ್ರಮಗಳಿಗೆ ಅನುಬಂಧ-1ರಲ್ಲಿ ಸೂಚಿಸಿರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.

**ಷರತ್ತುಗಳು:**

1. 2015-16ನೇ ಸಾಲಿನಲ್ಲಿ ಹೊಸದಾಗಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರಿದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದ್ದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.
4. ಆರ್ಥಿಕ ಇಲಾಖೆ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸುವುದು.
5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.
6. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

.....2

7. ಪರಿಶಿಷ್ಟ ಜಾತಿ ಉಪ ಯೋಜನೆ ಹಾಗೂ ಪರಿಶಿಷ್ಟ ಪಂಗಡದ ಉಪ ಯೋಜನೆಯಡಿಯಲ್ಲಿನ ಅನುದಾನ ಹಂಚಿಕೆ ಹಾಗೂ ಕಾಮಗಾರಿಗಳ ಕುರಿತಂತೆ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿರುವ ಅಧಿಕಾರಯುಕ್ತ ಸಮಿತಿಯ ನಿರ್ಣಯದ ನಂತರ ಕಾಮಗಾರಿಗಳ ಅನುಷ್ಠಾನದ ಬಗ್ಗೆ ಕ್ರಮ ಕೈಗೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 1996. ದಿನಾಂಕ:10/07/1996ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಆರ್ಥಿಕ ಇಲಾಖೆಯ ಮತ್ತು ಯೋಜನಾ ಇಲಾಖೆಯ ಸಹಮತಿ ಇದೆ ಎಂದು ಭಾವಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

G. Annapurna
(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ,
(ಆಡಳಿತ ಕನ್ನಡ)

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸಟಿಯರ್ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಅಂಬೇಡ್ಕರ್ ವೀಧಿ, ಬೆಂಗಳೂರು.
6. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ , ಬೆಂಗಳೂರು.
7. ಹಿರಿಯ ನಿರ್ದೇಶಕರು, ಮುಖ್ಯ ಮೌಲ್ಯಮಾಪನಾಧಿಕಾರಿ ಪ್ರಾಧಿಕಾರ ಕೊಠಡಿ ಸಂಖ್ಯೆ 542, ಬಹುಮಹಡಿ ಕಟ್ಟಡ, ಬೆಂಗಳೂರು.
8. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ, ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7&8), ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು
14. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
15. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

# ಕರ್ನಾಟಕ ರಾಜ್ಯ ಗ್ಯಾಸೆಟಿಯರ್ ಇಲಾಖೆ

## 2015-16 ನೇ ಸಾಲಿನ ವಾರ್ಷಿಕ ಯೋಜನೆ

**ಲೆಕ್ಕ ಶೀರ್ಷಿಕೆ:3454-02-110-0-01-059 ಇತರೆ ವೆಚ್ಚಗಳು** ರೂ.ಲಕ್ಷಗಳಲ್ಲಿ

| ವರ್ಷ | ಉಪಶೀರ್ಷಿಕೆ | ಅನುದಾನ | ಹಮ್ಮಿಕೊಂಡಿರುವ ಕಾರ್ಯಕ್ರಮಗಳು | ಮುಂದುವರೆದ/ ಹೊಸ ಯೋಜನೆ | |
|---|---|---|---|---|---|
| 2015-16 | ಸಾಮಾನ್ಯ | 20.00 | 1. ವಿಶೇಷ ಪ್ರಕಟಣೆಗಳ ರಚನೆ, ಸಂಪಾದನೆ ಮತ್ತು ಮುದ್ರಣ | ಹೊಸ ಯೋಜನೆ | 8.00 |
| | | | 2. ಪ್ರಕಟಣೆಯಾಗಿರುವ ಗ್ಯಾಸೆಟಿಯರ್‌ಗಳ ಗಣಕೀಕರಣ | ಹೊಸ ಯೋಜನೆ | 3.00 |
| | | | 3. ಜಿಲ್ಲಾ/ ತಾಲ್ಲೂಕು ಗ್ಯಾಸೆಟಿಯರ್‌ಗಳ ಸಂಪಾದನೆ ಮತ್ತು ಮುದ್ರಣ | ಹೊಸ ಯೋಜನೆ | 3.00 |
| | | | ಒಟ್ಟು | | 14.00 |

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
(ಆಡಳಿತ ಕನ್ನಡ)